**ಕರ್ನಾಟಕ ಸರ್ಕಾರ**

**ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ**

**ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.**

**ಸಂಖ್ಯೆ : ವಾಇ : ಉ ನಿ : ಸುಮಪ : 2017-18** **ದಿನಾಂಕ: 1-7-2017**

# ಮಾಧ್ಯಮ ಮುಖ್ಯಸ್ಥರ ಗಮನಕ್ಕೆ

**ದೃಶ್ಯ ಮಾಧ್ಯಮ ಮತ್ತು ಮುದ್ರಣ ಮಾಧ್ಯಮಗಳಲ್ಲಿ "ದೊಂಬರಾಟ' ಪದವನ್ನು ವ್ಯಂಗ್ಯ ಪದವನ್ನಾಗಿ ಬಳಕೆ ಮಾಡುತ್ತಿರುವ ಕುರಿತು ಕರ್ನಾಟಕ ರಾಜ್ಯ ದೊಂಬರ ಸಂಘದ ಅಧ್ಯಕ್ಷರು ವಿಷಾದ ವ್ಯಕ್ತಪಡಿಸಿ ಮುಖ್ಯಮಂತ್ರಿಯವರಿಗೆ ಮನವಿ ಮಾಡಿದ್ದು,' ದೊಂಬರಾಟ' ಪದವನ್ನು ಇನ್ನು ಮುಂದೆ ವ್ಯಂಗ್ಯ ಪದವನ್ನಾಗಿ ಬಳಕೆ ಮಾಡದಂತೆ ಮಾಧ್ಯಮಗಳಿಗೆ ಸೂಕ್ತ ನಿರ್ದೇಶನ ನೀಡುವಂತೆ ಕೋರಿದ್ದಾರೆ.**

ಸಂವಿಧಾನದ 1950 ರ ಅನ್ವಯ "ದೊಂಬರ ಜಾತಿಯು" ಪರಿಶಿಷ್ಟ ಜಾತಿಗಳ ಅಧಿಸೂಚನೆಯಲ್ಲಿ 33ನೇ ಉಪ ಜಾತಿಗಳಲ್ಲಿ ಸೇರ್ಪಡೆಯಾಗಿರುತ್ತದೆ. ದೊಂಬರ ಜಾತಿಯು ತನ್ನದೇ ಆದ ಸಂಸ್ಕೃತಿ ವೈಶಿಷ್ಟ್ಯತೆಯನ್ನು ಹೊಂದಿದ್ದು, ಸಂವಿಧಾನದ 1950 ನೇ ಪರಿಚ್ಛೇಧ 15 ರ ಅನ್ವಯ ಜಾತಿನಿಂದನೆ ಕಾನೂನು ಬಾಹಿರವಾಗಿರುತ್ತದೆ. ಆದ್ದರಿಂದ ಅನವಶ್ಯಕವಾಗಿ ಜಾತಿಯನ್ನು ವ್ಯಂಗ್ಯ ಪದವನ್ನಾಗಿ ಬಳಕೆ ಮಾಡಿಕೊಳ್ಳದಂತೆ ಮಾಧ್ಯಮದವರಿಗೆ ಈ ಮೂಲಕ ಮನವಿ ಮಾಡಲಾಗಿದೆ.

ನಿರ್ದೇಶಕರ ಪರವಾಗಿ

**ಪತ್ರಿಕಾ ಪ್ರಕಟಣೆ**

# ಚುನಾವಣಾ ಸಂದರ್ಭದಲ್ಲಿ ಪ್ರಸ್ತಾವನೆಗಳ ಪರಿಶೀಲನೆಗೆ ಮುಖ್ಯ ಕಾರ್ಯದರ್ಶಿಗಳ ಅಧ್ಯಕ್ಷತೆಯ ತ್ರಿ-ಸದಸ್ಯ ಸಮಿತಿ ರಚನೆ

**ಬೆಂಗಳೂರು, ಜುಲೈ 1 (ಕರ್ನಾಟಕ ವಾರ್ತೆ)**

ಚುನಾವಣೆಯ ಸಂದರ್ಭದಲ್ಲಿ ಮಾದರಿ ನೀತಿ ಸಂಹಿತೆ ಜಾರಿಯಲ್ಲಿರುವಾಗ ಬರುವ ಪ್ರಸ್ತಾವನೆಗಳನ್ನು ಭಾರತ ಚುನಾವಣೆ ಆಯೋಗಕ್ಕೆ ಕಳುಹಿಸುವ ಮುನ್ನ ಪರಿಶೀಲಿಸಲು ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ತ್ರಿ-ಸದಸ್ಯ ಸಮಿತಿಯನ್ನು ರಚಿಸಿ ಸರ್ಕಾರವು ಆದೇಶ ಹೊರಡಿಸಿದೆ.

ಭಾರತ ಚುನಾವಣಾ ಆಯೋಗದ ನಿರ್ದೇಶನದಂತೆ ಈ ಸಮಿತಿಯನ್ನು ರಚಿಸಲಾಗಿದ್ದು, ಪ್ರಸ್ತಾವನೆ ಸಲ್ಲಿಸಿದ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿ ಹಾಗೂ ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆಯ (ಆಡಳಿತ ಸುಧಾರಣೆ ತರಬೇತಿ ಮತ್ತು ರಾಜಕೀಯ ಪಿಂಚಣಿ)  ಅಪರ ಮುಖ್ಯ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿ ಈ ಸಮಿತಿಯ ಸದಸ್ಯರಾಗಿರುತ್ತಾರೆ.

ಈ ಸಮಿತಿಯು ಚುನಾವಣೆ ಸಂದರ್ಭದಲ್ಲಿ ಬರುವ ಪ್ರಸ್ತಾವನೆಗಳ ಅಗತ್ಯತೆಯನ್ನು ಪರಿಶೀಲಿಸಿ ತನ್ನ ಟಿಪ್ಪಣಿಯನ್ನು ಕರ್ನಾಟಕ ರಾಜ್ಯ ಮುಖ್ಯ ಚುನಾವಣಾಧಿಕಾರಿಗಳಾದ ಪ್ರಧಾನ ಕಾರ್ಯದರ್ಶಿಗಳು, ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ (ಚುನಾವಣೆ) ಇವರ ಮೂಲಕ ಭಾರತ ಚುನಾವಣಾ ಆಯೋಗಕ್ಕೆ ಕಳುಹಿಸಬೇಕು.

ಸಮಿತಿಯು ಪರಿಶೀಲಿಸಿದ ಪ್ರಸ್ತಾವನೆಯ ಸಂಪೂರ್ಣ ವಿವರಗಳು ಹಾಗೂ ಆ ಯೋಜನೆಯ ಜಾರಿಯ ತುರ್ತು ಅಗತ್ಯತೆ ಅಂದರೆ ಚುನಾವಣಾ ಪ್ರಕ್ರಿಯೆ ಪೂರ್ಣಗೊಳ್ಳುವವರೆಗೆ ಈ ಪ್ರಸ್ತಾವನೆಯನ್ನು ತಡೆಹಿಡಿಯಲು ಏಕೇ ಸಾಧ್ಯವಿಲ್ಲ ಎಂಬ ಬಗ್ಗೆ ಟಿಪ್ಪಣಿಯೊಂದಿಗೆ ಸಂಬಂಧಿಸಿದ ಮುಖ್ಯ ಚುನಾವಣಾಧಿಕಾರಿಗಳಿಗೆ ಕಳುಹಿಸುವುದು

ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಗಳು ಈ ಸಮಿತಿಯ ಸಂಚಾಲಕರಾಗಿದ್ದು ಇಲಾಖೆಗಳು ತಮ್ಮ ಪ್ರಸ್ತಾವನೆಗಳನ್ನು ಇವರಿಗೆ ಸಲ್ಲಿಸಬೇಕು. ಸಮಿತಿಯ ಎಲ್ಲಾ ಚಟುವಟಿಕೆಗಳ ಸಮನ್ವಯವನ್ನು ಇವರು ನಿರ್ವಹಿಸಲಿದ್ದಾರೆ.

ಮುಖ್ಯ ಚುನಾವಣಾಧಿಕಾರಿಗಳು ಮಾದರಿ ನೀತಿ ಸಂಹಿತೆಯ ಪ್ರತಿಯನ್ನು ಈ ಸಮಿತಿಗೆ ಒದಗಿಸಲಿದ್ದು ಅದರನ್ವಯ ಸಮಿತಿಯು ಪ್ರಸ್ತಾವನೆಗಳನ್ನು ಪರಿಶೀಲಿಸಲಿದೆ ಎಂದು ಸರ್ಕಾರದ ಆದೇಶದಲ್ಲಿ ತಿಳಿಸಲಾಗಿದೆ.

ಎಸ್‌ಎಂ:ಜೆಡಿ:ಜಿಪಿಆರ್.

## ಅಂತಿಮ ಆಯ್ಕೆಪಟ್ಟಿ – ವೆಬ್‌ಸೈಟ್‌ನಲ್ಲಿ ಪ್ರಕಟ

**ಬೆಂಗಳೂರು, ಜುಲೈ 1 (ಕರ್ನಾಟಕ ವಾರ್ತೆ)**

ಕರ್ನಾಟಕ ಲೋಕಸೇವಾ ಆಯೋಗವು 2014 ನೇ ಸಾಲಿನ ಗೆಜೆಟೆಡ್ ಪ್ರೊಬೇಷನರ್ಸ್ 464 ಹುದ್ದೆಗಳ ನೇಮಕಾತಿಗೆ ಸಂಬಂಧಿಸಿದಂತೆ ಅಂತಿಮ ಆಯ್ಕೆಪಟ್ಟಿಯನ್ನು ಆಯೋಗದ ವೆಬ್‌ಸೈಟ್ http://kpsc.kar.nic.in/List ನಲ್ಲಿ ಅಭ್ಯರ್ಥಿಗಳ ಮಾಹಿತಿಗಾಗಿ ಪ್ರಕಟಿಸಿದೆ.

ಎಸ್‌ಎಂ:ಜೆಡಿ:ಜಿಪಿಆರ್.

## ಸರ್ಕಾರಿ ನೌಕಕರ ವರ್ಗಾವಣೆ ಅವಧಿ ವಿಸ್ತರಣೆ

**ಬೆಂಗಳೂರು, ಜುಲೈ 1 (ಕರ್ನಾಟಕ ವಾರ್ತೆ)**

ರಾಜ್ಯ ಸರ್ಕಾರಿ ನೌಕರರ ವರ್ಗಾವಣೆಯ ಅವಧಿಯನ್ನು ಜುಲೈ 15 ರವರೆಗೆ ವಿಸ್ತರಿಸಿ ರಾಜ್ಯ ಸರ್ಕಾರ ಆದೇಶ ಹೊರಡಿಸಿದೆ.

ಎಸ್‌ಎಂ:ಜೆಡಿ:ಜಿಪಿಆರ್.

## ಕೋರಮಂಗಲದಲ್ಲಿ ಸಾರಿಗೆ ಅದಾಲತ್

**ಬೆಂಗಳೂರು, ಜುಲೈ 1 (ಕರ್ನಾಟಕ ವಾರ್ತೆ)**

ಉಪ ಸಾರಿಗೆ ಆಯುಕ್ತರು ಮತ್ತು ಹಿರಿಯ ಪ್ರಾದೇಶಿಕ ಸಾರಿಗೆ ಅಧಿಕಾರಿಗಳ ಕಚೇರಿ, ಬೆಂಗಳೂರು (ಕೇಂದ್ರ) ಸಾರ್ವಜನಿಕರ ಕುಂದುಕೊರತೆ ಹಾಗೂ ಸಲಹೆಗಳನ್ನು ಪಡೆಯುವ ಸಲುವಾಗಿ ಜುಲೈ 10 ರಂದು ಮಧ್ಯಾಹ್ನ 3.00 ಗಂಟಗೆ ಉಪ ಸಾರಿಗೆ ಆಯುಕ್ತರು ಮತ್ತು ಹಿರಿಯ ಪ್ರಾದೇಶಿಕ ಸಾರಿಗೆ ಅಧಿಕಾರಿಗಳ ಕಚೇರಿ, ಬೆಂಗಳೂರು (ಕೇಂದ್ರ) 2ನೇ ಮಹಡಿ, ಬಿ.ಡಿ.ಎ. ವಾಣಿಜ್ಯ ಸಂಕೀರ್ಣ, ಕೋರಮಂಗಲ, ಬೆಂಗಳೂರು – 560 034 ಇಲ್ಲಿ ಸಾರಿಗೆ ಅದಾಲತ್ ಏರ್ಪಡಿಸಿದೆ.

ಈ ಸಾರಿಗೆ ಅದಾಲತ್‌ನಲ್ಲಿ ಸಾರಿಗೆ ಇಲಾಖೆಯ ಹಿರಿಯ ಅಧಿಕಾರಿಗಳು ಹಾಜರಿದ್ದು, ಉಪ ಸಾರಿಗೆ ಆಯುಕ್ತರು ಮತ್ತು ಹಿರಿಯ ಪ್ರಾದೇಶಿಕ ಸಾರಿಗೆ ಅಧಿಕಾರಿಗಳ ಕಚೇರಿ, ಬೆಂಗಳೂರು (ಕೇಂದ್ರ) ಕ್ಕೆ ಸಂಬಂಧಿಸಿದ ಸಂಬಂಧಿಸಿದ ಸಾರ್ವಜನಿಕರ ಕುಂದುಕೊರತೆಗಳನ್ನು ಆಲಿಸಿ ಸೂಕ್ತ ಪರಿಹಾರವನ್ನು ಒದಗಿಸಿ ಕ್ರಮ ಕೈಗೊಳ್ಳುವರು. ಈ ಸಾರಿಗೆ ವ್ಯಾಪ್ತಿಗೆ ಬರುವ ಸಾರ್ವಜನಿಕರು ಈ ಅದಾಲತ್‌ನ್ ಪ್ರಯೋಜನವನ್ನು ಪಡೆಯಬಹುದಾಗಿದೆ.

ಎಸ್‌ಎಂ:ಜೆಡಿ:ಜಿಪಿಆರ್.

# ವೇತನ ಆಯೋಗದ ಕಚೇರಿ ಸ್ಥಳಾಂತರ

**ಬೆಂಗಳೂರು, ಜುಲೈ 1 (ಕರ್ನಾಟಕ ವಾರ್ತೆ)**

**ರಾಜ್ಯ ಸರ್ಕಾರದ ನಿವೃತ್ತ ಅಪರ ಮುಖ್ಯ ಕಾರ್ಯದರ್ಶಿ ಎಂ.ಆರ್. ಶ್ರೀನಿವಾಸಮೂರ್ತಿ ಅಧ್ಯಕ್ಷತೆಯ 6ನೇ ವೇತನ ಆಯೋಗದ ಕಚೇರಿಯು ಕಾಫಿ ಮಂಡಳಿಯ ಮೊದಲ ಮಹಡಿಗೆ ಸ್ಥಳಾಂತರ ಗೊಂಡಿದೆ.**

**ಆಯೋಗದ ಅಧ್ಯಕ್ಷ ಶ್ರೀ ಎಂ.ಆರ್. ಶ್ರೀನಿವಾಸಮೂರ್ತಿ, ಸದಸ್ಯರಾದ ಮಹಮದ್ ಸನಾವುಲ್ಲಾ ಹಾಗೂ ಆರ್.ಎಸ್. ಪೋಂಡೆ ಹಾಗೂ ಆಯೋಗದ ಸದಸ್ಯ ಕಾರ್ಯದರ್ಶಿ ಮಂಜುನಾಥ ನಾಯಕ್ ಅವರು ಶುಕ್ರವಾರ ಕಾಫಿ ಮಂಡಳಿಯ ಕಚೇರಿಗೆ ಆಗಮಿಸಿ ತಮ್ಮ ಕೆಲಸ ಕಾರ್ಯಗಳನ್ನು ಮುಂದುವರೆಸಿದರು. ಇದಕ್ಕೂ ಮುನ್ನ ಆಯೋಗವು ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆಯ ಕಚೇರಿಯಲ್ಲಿ ತಾತ್ಕಾಲಿಕವಾಗಿ ಕಾರ್ಯನಿರ್ವಹಿಸುತ್ತಿತ್ತು.**

**ಆಯೋಗದ ಕಚೇರಿ ವಿಳಾಸ : ಸದಸ್ಯ ಕಾರ್ಯದರ್ಶಿಗಳು, ಆರನೇ ವೇತನ ಆಯೋಗ, ಎರಡನೇ ಮಹಡಿ, ಕಾಫಿ ಮಂಡಳಿ, ಅಂಬೇಡ್ಕರ್ ವೀದಿ, ಬೆಂಗಳೂರು.**

# Office Shifted

Bengaluru, July 1 (Karnataka Information)

Office of the 6th Pay Commission shifted to 2nd floor of Coffee Board in Dr. B.R. Ambedkar Veedhi, Bangalore today.

The commission was temporarily functioning at Karnataka State Finance Corporation Building. Chairman of the commission, M.R. Srinivasa Murthy, retired Additional Chief Secretary to Government and members of the commission Mohmmad Sanaulla and R.S. Ponde and member secretary Manjunath Naik arrived at the newly shifted office and started functioning.

New Address of the Commission:
Member Secretary, 6th Pay Commission,
1st Floor, Coffee Board, Dr. B.R. Ambedkar Veedhi,
Bengaluru -560 001

# <u>ಕಬ್ಬನ್‌ಪಾರ್ಕ್‌ನಲ್ಲಿ ಈ ಭಾನುವಾರ</u>

**ಬೆಂಗಳೂರು, ಜುಲೈ 1 (ಕರ್ನಾಟಕ ವಾರ್ತೆ)**

ಶ್ರೀ ಚಾಮರಾಜೇಂದ್ರ ಉದ್ಯಾನವನ (ಕಬ್ಬನ್ ಪಾರ್ಕ್) ಒಳರಸ್ತೆಗಳಲ್ಲಿ ಭಾನುವಾರದ ದಿನಗಳಂದು ಸಾರ್ವಜನಿಕ ವಾಹನ ಸಂಚಾರವನ್ನು ನಿಷೇಧಿಸಲಾಗಿದ್ದು, ಉದ್ಯಾನವನದ ಆವರಣದಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರ ಅನುಕೂಲಕ್ಕಾಗಿ ಪ್ರತಿ ಭಾನುವಾರದ ದಿನಗಳಂದು ವಿವಿಧ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗುತ್ತಿರುತ್ತದೆ. **ದಿನಾಂಕ: 02-07-2017ರ** ಭಾನುವಾರದಂದು ಶ್ರೀ ಚಾಮರಾಜೇಂದ್ರ ಉದ್ಯಾನವನದ (ಕಬ್ಬನ್ ಉದ್ಯಾನವನ) ಬ್ಯಾಂಡ್ ಸ್ಟ್ಯಾಂಡ್ ಆವರಣ ಹಾಗೂ ಮುಂಭಾಗದ ರಸ್ತೆಯಲ್ಲಿ ಮತ್ತು ಶ್ರೀ ಚಾಮರಾಜೇಂದ್ರ ಒಡೆಯರ್ ಪ್ರತಿಮೆಯ ಸುತ್ತಮುತ್ತಲಿನ ಪ್ರದೇಶದಲ್ಲಿ ಈ ಕೆಳಕಂಡ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗಿರುತ್ತದೆ. ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ, ಸದರಿ ಕಾರ್ಯಚಟುವಟಿಕೆಗಳ ಸದುಪಯೋಗವನ್ನು ಪಡೆದುಕೊಳ್ಳುವಂತೆ ಈ ಮೂಲಕ ಕೋರಲಾಗಿದೆ.

1) ಬೆಳಿಗ್ಗೆ 06.00 ಗಂಟೆಯಿಂದ ಬೆಳಿಗ್ಗೆ 07.00 ಗಂಟೆಯವರೆಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದೊಂದಿಗೆ **ಬ್ಯಾಂಡ್ ಸ್ಟ್ಯಾಂಡ್ ಆವರಣದಲ್ಲಿ "ಉದ್ಯಾನವನದಲ್ಲಿ ಉದಯರಾಗ"** ಎಂಬ ಶೀರ್ಷಿಕೆಯಡಿ **ಶ್ರೀ. ಶಿವರಾಜ್ ಮತ್ತು ತಂಡ ಕನಕಪುರ ತಾಲ್ಲೂಕು, ರಾಮನಗರ ಜಿಲ್ಲೆ** ರವರಿಂದ **ಸುಗಮ ಸಂಗೀತ ಮತ್ತು ಜಾನಪದ ಗೀತೆ** ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

2) ಸಂಜೆ 04.00 ಗಂಟೆಯಿಂದ ಸಂಜೆ 05.00 ಗಂಟೆಯವರೆಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದೊಂದಿಗೆ **ಬ್ಯಾಂಡ್ ಸ್ಟ್ಯಾಂಡ್ ಆವರಣದಲ್ಲಿ "ಉದ್ಯಾನವನದಲ್ಲಿ ಸಂಧ್ಯಾರಾಗ"** ಎಂಬ ಶೀರ್ಷಿಕೆಯಡಿ ಶ್ರೀ. **ಕಬೇರಪ್ಪ ಮತ್ತು ತಂಡ ಗದಗ ಜಿಲ್ಲೆ** ರವರಿಂದ **ಸುಗಮ ಸಂಗೀತ ಮತ್ತು ಶಾಸ್ತ್ರೀಯ ಸಂಗೀತ** ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

3) ಬೆಳಿಗ್ಗೆ 8.00 ಗಂಟೆಯಿಂದ ಸಂಜೆ 5.00 ಗಂಟೆಯವರೆಗೆ ಉದ್ಯಾನವನದಲ್ಲಿರುವ ಒಳರಸ್ತೆಗಳಲ್ಲಿ ನಗರ ಭೂಸಾರಿಗೆ ನಿರ್ದೇಶನಾಲಯರವರ ಸಹಯೋಗದೊಂದಿಗೆ **ಬಾಡಿಗೆ ರಹಿತ ಸೈಕಲ್ ಸವಾರಿ ಕಾರ್ಯಕ್ರಮವನ್ನು** ಏರ್ಪಡಿಸಲಾಗಿದೆ.

4) ಕಬ್ಬನ್ ಉದ್ಯಾನವನದ ಒಳರಸ್ತೆಗಳಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ವಯೋವೃದ್ಧರ ಅನುಕೂಲಕ್ಕಾಗಿ ಎರಡು ಸಂಖ್ಯೆಯ **ಪರಿಸರ ಸ್ನೇಹಿ ವಿದ್ಯುತ್‌ಚಾಲಿತ ವಾಹನಗಳ** ಸೇವೆಯನ್ನು ನಿಗಧಿತ ಶುಲ್ಕ ನೀಡಿ ಸಾರ್ವಜನಿಕರು ಪಡೆಯಬಹುದು.

**<u>ಈ ಭಾನುವಾರದ ವಿಶೇಷ ಕಾರ್ಯಕ್ರಮಗಳು:</u>**

**I. <u>ಸ್ಥಳ: ಬ್ಯಾಂಡ್ ಸ್ಟ್ಯಾಂಡ್ ಆವರಣ</u>**

- ಬೆಳಿಗ್ಗೆ 7.00 ಗಂಟೆಯಿಂದ 8.00 ಗಂಟೆಯವರೆಗೆ **ಯೂನಿವರ್ಸ್ ಆರ್ಟ್ ಫೌಂಡೇಶನ್** ಸಂಸ್ಥೆಯ ಸಹಯೋಗದೊಂದಿಗೆ **ಕುಮಾರಿ. ರಾಜೇಶ್ವರಿ.ಎ□.** ಮತ್ತು ತಂಡ ರವರಿಂದ **ಭರತನಾಟ್ಯ** ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

- ಬೆಳಿಗ್ಗೆ 8.00 ಗಂಟೆಯಿಂದ 9.00 ಗಂಟೆಯವರೆಗೆ ಶ್ರೀವಾಣಿ ವಿದ್ಯಾ ಕೇಂದ್ರ, **ಬಸವೇಶ್ವರ ನಗರ,** ಬೆಂಗಳೂರು ಶಾಲಾ **ವಿದ್ಯಾರ್ಥಿನಿ ಕುಮಾರಿ. ಸುಮೇಧಿನಿ ರವರಿ□ದ ಭರತನಾಟ್ಯ** ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.'

## ಕೇಬಲ್ ಟಿ.ವಿ ಪ್ರಸಾರ ಡಿ.ಎ.ಎಸ್. ವ್ಯಾಪ್ತಿಗೆ ಕಡ್ಡಾಯ

ಬೆಂಗಳೂರು, ಜುಲೈ 1, (ಕರ್ನಾಟಕ ವಾರ್ತೆ)

ಕೇಂದ್ರ ಸರ್ಕಾರವು ಕೇಬಲ್ ಟಿ.ವಿ. ಜಾಲವನ್ನು ಡಿ.ಎ.ಎಸ್.(Digital Addressable System) ವ್ಯಾಪ್ತಿಗೆ ತರುವುದನ್ನು ಕಡ್ಡಾಯ ಮಾಡಿ ಆದೇಶ ಹೊರಡಿಸಿದೆ. ಈ ಹಿನ್ನೆಲೆಯಲ್ಲಿ ರಾಜ್ಯಾದ್ಯಂತ ಕಾರ್ಯನಿರ್ವಹಿಸುತ್ತಿರುವ ಕೇಬಲ್ ಆಪರೇಟರ್ ಮತ್ತು ಎಂ.ಎಸ್.ಓ. ಗಳು ಕೇಬಲ್ ಚಾನಲ್ ಪ್ರಸಾರವನ್ನು ಕಡ್ಡಾಯವಾಗಿ ಡಿ.ಎ.ಎಸ್. ವ್ಯಾಪ್ತಿಗೆ ತರಬೇಕು. ಈ ನಿಯಮವನ್ನು ಉಲ್ಲಂಘಿಸಿದವರ ವಿರುದ್ಧ ಕೇಬಲ್ ನೆಟ್‌ವರ್ಕ್ ರೆಗ್ಯುಲೇಶನ್ ಕಾಯ್ದೆಯನ್ವಯ ಕ್ರಮ ಕೈಗೊಳ್ಳಲಾಗುವುದು. ಆದ್ದರಿಂದ ಈ ಬಗ್ಗೆ ದೂರುಗಳಿದ್ದಲ್ಲಿ ಸಾರ್ವಜನಿಕರು ಆಯಾ ಜಿಲ್ಲಾ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯಲ್ಲಿ ಸ್ಥಾಪಿತವಾಗಿರುವ ದೂರು ಕೋಶಕ್ಕೆ ದೂರನ್ನು ಸಲ್ಲಿಸಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.

**ಎಸ್‌ಎಂ:ಬಿಜಿಪಿ:ಜಿಪಿಆರ್**

## ದೂರದರ್ಶನದಲ್ಲಿ "ನೆಲದ ಸಿರಿ" ಸಾಕ್ಷ್ಯಚಿತ್ರ

ಬೆಂಗಳೂರು, ಜುಲೈ 1, (ಕರ್ನಾಟಕ ವಾರ್ತೆ)

ಬೆಂಗಳೂರು ದೂರದರ್ಶನ ಕೇಂದ್ರವು ನೆಲದ ಸಿರಿ ಮಾಲಿಕೆಯಡಿ ಈ ಕೆಳಕಂಡ ಸಾಕ್ಷ್ಯಚಿತ್ರಗಳ ಸಂಚಿಕೆಗಳನ್ನು ಆಯಾ ದಿನಾಂಕಗಳಂದು ಸಂಜೆ 6:00 ರಿಂದ 6:15 ಅವಧಿಯಲ್ಲಿ ಪ್ರಸಾರ ಮಾಡಲಿದೆ.

ದಿನಾಂಕ: 03-07-2017, ಸೋಮವಾರ, ಹೊಸ ಬೆಳಕು (ಆಂಗನಮಕ್ಕಿ ಜಲಾಶಯದ ನಿರಾಶ್ರಿತರಿಗೆ ಹಕ್ಕುಪತ್ರ) ದಿನಾಂಕ: 04-07-2017, ಮಂಗಳವಾರ, ಆಲಮಟ್ಟಿ ಹಿನ್ನಿರನ್ನು ಕೆರೆಗಳಿಗೆ ತುಂಬಿಸುವ ಕಾರ್ಯಕ್ರಮ. ದಿನಾಂಕ: 05-07-2017, ಬುಧವಾರ, ಪಿಂಚಣಿ

ಯೋಜನೆ ಮತ್ತು ವ್ಯಾಟ್ಸಪ್ ದೂರು. ಉತ್ತರ ಕನ್ನಡ ಜಿಲ್ಲೆ. ದಿನಾಂಕ: 06-07-2017, ಗುರುವಾರ, ಹೇಮಾವತಿ ಎಡದಂಡೆ ನಾಲಾ ಯೋಜನೆ. ದಿನಾಂಕ: 10-07-2017, ಸೋಮವಾರ, ಭದ್ರಾ ಮೇಲ್ದಂಡೆ ಯೋಜನೆ.